# All India Radio: Bangalore
## National Bulletin In Kannada
### 17.06.2025  1.10 p.m.

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಜಿ-೭ ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಕೆನಡಾ ತಲುಪಿದ ಪ್ರಧಾನಿ ನರೇಂದ್ರ ಮೋದಿ
2. ಮಧ್ಯಪ್ರಾಚ್ಯದಲ್ಲಿ ಶಾಂತಿ, ಸ್ಥಿರತೆ ಸ್ಥಾಪಿಸಲು ತಮ್ಮ ಬದ್ಧತೆ ಪುನರುಚ್ಚರಿಸಿದ ಜಿ-೭ ರಾಷ್ಟ್ರಗಳ ನಾಯಕರು
3. ಇರಾನ್ ಮೇಲೆ ಇಸ್ರೇಲ್ ದಾಳಿ; ಟೆಹ್ರಾನ್‌ನಲ್ಲಿರುವ ಭಾರತೀಯ ವಿದ್ಯಾರ್ಥಿಗಳ ಸ್ಥಳಾಂತರ
4. ಹರಿಯಾಣದಲ್ಲಿ ದೇಶದ ಅತೀದೊಡ್ಡ ಗತಿಶಕ್ತಿ ಸರಕು ಟರ್ಮಿನಲ್ ಲೋಕಾರ್ಪಣೆ ಗೊಳಿಸಿದ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಬೆಳಗ್ಗೆ ಕೆನಡಾದ ಕ್ಯಾಲ್ಗರಿ ತಲುಪಿದರು. ಅವರಿಗೆ ವಿಮಾನ ನಿಲ್ದಾಣದಲ್ಲಿ ಆತ್ಮೀಯ ಸ್ವಾಗತ ನೀಡಲಾಯಿತು. ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಸಂಜೆ ಕೆನಡಾದ ಕನನಾಸ್ಕಿಸ್‌ನಲ್ಲಿ ನಡೆಯಲಿರುವ ಜಿ-೭ ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ. ಇದು ಪ್ರಧಾನಿಯವರ ಸತತ ೬ನೇ ಜಿ-೭ ಶೃಂಗಸಭೆಯಾಗಿದೆ. ಕೆನಡಾದ ಪ್ರಧಾನಿ ಮಾರ್ಕ್‌ಕಾರ್ನಿ ಅವರ ಆಹ್ವಾನದ ಮೇರೆಗೆ ಕೆನಡಾಕ್ಕೆ ಎರಡು ದಿನಗಳ ಭೇಟಿಯ ಸಮಯದಲ್ಲಿ, ಪ್ರಧಾನಿ ಮೋದಿ ಅವರು ಶೃಂಗಸಭೆಯ ಹೊರತಾಗಿ ಹಲವಾರು ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ. ಜಿ-೭ ದೇಶಗಳ ನಾಯಕರು, ಇತರೆ ಆಹ್ವಾನಿತ ರಾಷ್ಟ್ರಗಳು ಮತ್ತು ಅಂತಾರಾಷ್ಟ್ರೀಯ ಸಂಸ್ಥೆಗಳ ಮುಖ್ಯಸ್ಥರೊಂದಿಗೆ ನಿರ್ಣಾಯಕ ಜಾಗತಿಕ ವಿಷಯಗಳ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ. ಇಂಧನ ಭದ್ರತೆ, ತಂತ್ರಜ್ಞಾನ ಮತ್ತು ನಾವೀನ್ಯತೆ, ವಿಶೇಷವಾಗಿ ಎಐ ಮತ್ತು ಕ್ವಾಂಟಮ್-ಸಂಬಂಧಿತ ಸಮಸ್ಯೆಗಳಿಗೆ ಸೇರಿದ ವಿಷಯಗಳು ಇದರಲ್ಲಿ ಸೇರಿವೆ.

<><><><>

ದಶಕದ ನಂತರ ಪ್ರಧಾನಿ ಮೋದಿ ಅವರು ಕೆನಡಾಕ್ಕೆ ನೀಡುತ್ತಿರುವ ಮೊದಲ ಭೇಟಿ ಇದಾಗಿದೆ. ೨೦೧೫ ರಲ್ಲಿ ಅವರ ಕೊನೆಯ ಭೇಟಿಯ ಸಮಯದಲ್ಲಿ, ದ್ವಿಪಕ್ಷೀಯ ಸಂಬಂಧಗಳನ್ನು ಕಾರ್ಯತಂತ್ರದ ಪಾಲುದಾರಿಕೆಯ ಮಟ್ಟಕ್ಕೆ ವಿಸ್ತರಿಸಲಾಯಿತು. ಭಾರತ-ಕೆನಡಾ ಸಂಬಂಧಗಳು ಬಲವಾದ ಜನರ-ಜನರ ಸಂಪರ್ಕ, ಬೆಳೆಯುತ್ತಿರುವ ವ್ಯಾಪಾರ ಮತ್ತು ಹೂಡಿಕೆ ಸಂಬಂಧಗಳು, ಭಾರತೀಯ ವಿದ್ಯಾರ್ಥಿಗಳ ಬಲವಾದ ಉಪಸ್ಥಿತಿ ಹಾಗೂ ವಿಜ್ಞಾನ, ತಂತ್ರಜ್ಞಾನ ಮತ್ತು ನಾವೀನ್ಯತೆ ಕ್ಷೇತ್ರಗಳಲ್ಲಿ ಸಹಕಾರಕ್ಕೆ ಅಗಾಧ ಸಾಮರ್ಥ್ಯದಿಂದ ಬೆಂಬಲಿತವಾಗಿದೆ. ಇನ್ನೊಂದೆಡೆ, ಇಸ್ರೇಲ್-ಇರಾನ್ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ ತಮ್ಮ ಕೆನಡಾ ಪ್ರವಾಸ ರದ್ದುಗೊಳಿಸಿದ್ದು, ಜಿ-೭ ಶೃಂಗಸಭೆಯಲ್ಲಿ ಭಾಗವಹಿಸುವುದಿಲ್ಲ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ.

<><><><>

ಕ್ರೊಯೇಷಿಯಾದಲ್ಲಿ ಯೋಗ ವೇಗವಾಗಿ ಜನಪ್ರಿಯತೆ ಗಳಿಸುತ್ತಿದೆ ಮತ್ತು ಜನರ ದೈನಂದಿನ ಜೀವನದ ಭಾಗವಾಗುತ್ತಿದೆ. ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಹಿನ್ನೆಲೆಯಲ್ಲಿ ಕ್ರೊಯೇಷಿಯಾದ ವಿವಿಧ ಸ್ಥಳಗಳಲ್ಲಿ ಇದೇ ೨೧ರಂದು  ಯೋಗ ಕಾರ್ಯಕ್ರಮಗಳು ಜರುಗಲಿವೆ. ಇನ್ನೊಂದೆಡೆ, ದ್ವಿಪಕ್ಷೀಯ ಸಂಬಂಧಗಳನ್ನು ಬಲಪಡಿಸಲು ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ ಕ್ರೊಯೇಷಿಯಾಗೆ ಭೇಟಿ ನೀಡುತ್ತಿದ್ದಾರೆ. ಪ್ರಧಾನಿ ಮೋದಿ ಅವರು ತಮ್ಮ ಮೂರು ರಾಷ್ಟ್ರಗಳ ಪ್ರವಾಸದ ಮೂರನೇ ಮತ್ತು ಕೊನೆಯ ಚರಣದಲ್ಲಿ ನಾಳೆ ಮಧ್ಯಾಹ್ನ ರಾಜಧಾನಿ ಜಾಗ್ರೆಬ್‌ಗೆ ಆಗಮಿಸಲಿದ್ದಾರೆ.  ಇದು ಕ್ರೊಯೇಷಿಯಾಗೆ ಭಾರತೀಯ ಪ್ರಧಾನಿಯೊಬ್ಬರ ಮೊದಲ ಭೇಟಿಯಾಗಲಿದೆ. ಕ್ರೊಯೇಷಿಯಾ ಭಾರತೀಯ ವಲಸಿಗರಿಗೆ ಹೊಸ ತಾಣವಾಗಿದೆ. ಆದಾಗ್ಯೂ, ಈ ಮಧ್ಯ ಮತ್ತು ಆಗ್ನೇಯ ಯುರೋಪಿಯನ್ ದೇಶದಲ್ಲಿ ಭಾರತೀಯ ಸಮುದಾಯವು ಸಂಖ್ಯೆಯಲ್ಲಿ ಕಡಿಮೆಯಾದರೂ, ಸಾಂಸ್ಕೃತಿಕ ಉಪಸ್ಥಿತಿಯಲ್ಲಿ ಪ್ರಬಲವಾಗಿದೆ. ಕ್ರೊಯೇಷಿಯಾ ರಾಜಧಾನಿ ಜಾಗ್ರೆಬ್‌ನಲ್ಲಿರುವ ಭಾರತೀಯ ವಲಸಿಗರು ಮತ್ತು ಕ್ರೊಯೇಷಿಯಾದ ಭಾರತದ ಸ್ನೇಹಿತರು, ಬಲವಾದ ಸಂಬಂಧಗಳಿಗಾಗಿ ಹೆಮ್ಮೆ ಮತ್ತು ಭರವಸೆಯಿಂದ ತುಂಬಿದ ಹೃದಯಗಳಿಂದ ಪ್ರಧಾನಿ ನರೇಂದ್ರ ಮೋದಿ ಅವರ ಬರುವಿಕೆಯನ್ನು ಕಾಯುತ್ತಿದ್ದಾರೆ. ಪ್ರಧಾನಿ ಮೋದಿ ಅವರ

ಭೇಟಿಯ ಬಗ್ಗೆ ಆಕಾಶವಾಣಿಯೊಂದಿಗೆ ಮಾತನಾಡಿದ ಜಾಗ್ರೆಬ್‌ನಲ್ಲಿರುವ ಭಾರತೀಯ ಐಟಿ ವೃತ್ತಿಪರ ಸಾಮ್ರಾಟ್, ಸಾಮರ್ಥ್ಯ ಹೊಂದಿರುವ ಸಣ್ಣ ದೇಶಗಳಲ್ಲಿಯೂ ಭಾರತದ ಪ್ರಭಾವ ಬೆಳೆಯುತ್ತಿದೆ ಎನ್ನುವುದು ಖುಷಿ ತಂದಿದೆ ಎಂದು ಹೇಳಿದರು.

<><><><>

ಮಧ್ಯಪ್ರಾಚ್ಯದಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆಯ ಮಧ್ಯೆ, ಇಸ್ರೇಲ್ ಮತ್ತು ಇರಾನ್ ನಡುವಿನ ಉಲ್ಬಣಗೊಳ್ಳುತ್ತಿರುವ ಪರಿಸ್ಥಿತಿಯನ್ನು ಪರಿಹರಿಸಲು ಜಿ-೭ ರಾಷ್ಟ್ರಗಳ ನಾಯಕರು ಜಂಟಿ ಹೇಳಿಕೆಯನ್ನು ಬಿಡುಗಡೆ ಮಾಡಿದ್ದಾರೆ. ಮಧ್ಯಪ್ರಾಚ್ಯದಲ್ಲಿ ಶಾಂತಿ ಮತ್ತು ಸ್ಥಿರತೆಗೆ ತಮ್ಮ ಬದ್ಧತೆಯನ್ನು ಜಿ-೭ ರಾಷ್ಟ್ರಗಳ ನಾಯಕರು ಪುನರುಚ್ಚರಿಸಿದ್ದಾರೆ. ಇಸ್ರೇಲ್ ತನ್ನನ್ನು ತಾನು ರಕ್ಷಿಸಿಕೊಳ್ಳುವ ಹಕ್ಕನ್ನು ದೃಢಪಡಿಸಿದ್ದಾರೆ ಮತ್ತು ಇಸ್ರೇಲ್‌ನ ಭದ್ರತೆಗೆ ತಮ್ಮ ನಿರಂತರ ಬೆಂಬಲವನ್ನು ವ್ಯಕ್ತಪಡಿಸಿದ್ದಾರೆ. ಪ್ರಾದೇಶಿಕ ಉದ್ವಿಗ್ನತೆಯ ನಡುವೆ ನಾಗರಿಕರನ್ನು ರಕ್ಷಿಸುವ ಪ್ರಾಮುಖ್ಯತೆಯನ್ನು ಜಿ-೭ ರಾಷ್ಟ್ರಗಳ ಗುಂಪು ಒತ್ತಿಹೇಳಿವೆ. ಈ ಪ್ರದೇಶದಲ್ಲಿ ಅಸ್ಥಿರತೆ ಮತ್ತು ಭಯೋತ್ಪಾದನೆಯ ಪ್ರಮುಖ ಮೂಲ ಇರಾನ್ ಎಂದು ಹೇಳಿದೆ. ಇರಾನ್ ಎಂದಿಗೂ ಪರಮಾಣು ಶಸ್ತ್ರಾಸ್ತ್ರವನ್ನು ಪಡೆಯಲು ಅನುಮತಿಸಬಾರದು ಎಂಬ ತಮ್ಮ ದೀರ್ಘಕಾಲದ ನಿಲುವನ್ನು ಜಿ-೭ ರಾಷ್ಟ್ರಗಳ ನಾಯಕರು ಪುನರುಚ್ಚರಿಸಿದ್ದಾರೆ. ಇರಾನ್ ಬಿಕ್ಕಟ್ಟನ್ನು ಪರಿಹರಿಸುವುದರಿಂದ ಮಧ್ಯಪ್ರಾಚ್ಯದಲ್ಲಿ ವ್ಯಾಪಕ ಹಗೆತನವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಇದರಲ್ಲಿ ಗಾಜಾದಲ್ಲಿ ಕದನ ವಿರಾಮವನ್ನು ಸಾಧಿಸುವ ಪ್ರಯತ್ನಗಳು ಸೇರಿವೆ ಎಂದು ಜಂಟಿ ಹೇಳಿಕೆಯಲ್ಲಿ ತಿಳಿಸಿದ್ದಾರೆ.

<><><><>

ಇರಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯು ಟೆಹ್ರಾನ್‌ನಲ್ಲಿರುವ ಭಾರತೀಯ ವಿದ್ಯಾರ್ಥಿಗಳನ್ನು ಸುರಕ್ಷತಾ ಕಾರಣಗಳಿಗಾಗಿ ನಗರದಿಂದ ಹೊರಗೆ ಸ್ಥಳಾಂತರಿಸಿದೆ. ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಸ್ವಂತ ವಾಹನ ಹೊಂದಿರುವ ಭಾರತೀಯ ಮೂಲದ ಇತರೆ ನಿವಾಸಿಗಳು ನಗರದಿಂದ ಹೊರಹೋಗುವಂತೆ ಸೂಚಿಸಲಾಗಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಕೆಲವು ಭಾರತೀಯರಿಗೆ ಅರ್ಮೇನಿಯಾದ ಗಡಿಯ ಮೂಲಕ ಇರಾನ್‌ನಿಂದ ಹೊರಹೋಗಲು ಅನುಕೂಲ ಮಾಡಿಕೊಡಲಾಗಿದೆ. ಎಲ್ಲಾ ಸಂಭಾವ್ಯ ಸಹಾಯವನ್ನು ನೀಡುವ ಉದ್ದೇಶದಿಂದ ರಾಯಭಾರ ಕಚೇರಿಯು ಸಮುದಾಯದೊಂದಿಗೆ ನಿರಂತರವಾಗಿ ಸಂಪರ್ಕದಲ್ಲಿದೆ. ಬಿಕ್ಕಟ್ಟಿನ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಹೆಚ್ಚಿನ ಸಲಹೆಗಳನ್ನು ನೀಡಲಾಗುವುದು ಎಂದು ವಿದೇಶಾಂಗ ಸಚಿವಾಲಯ ಹೇಳಿದೆ.

<><><><>

ಇರಾನ್ ಮತ್ತು ಇಸ್ರೇಲ್‌ನಲ್ಲಿನ ಬೆಳವಣಿಗೆಗಳನ್ನು ಗಮನದಲ್ಲಿಟ್ಟುಕೊಂಡು, ವಿದೇಶಾಂಗ ಸಚಿವಾಲಯ, ಪರಿಸ್ಥಿತಿಯನ್ನು ಮೇಲ್ವಿಚಾರಣೆ ಮಾಡಲು ಮತ್ತು ಭಾರತೀಯ ಪ್ರಜೆಗಳಿಗೆ ಸಹಾಯ ಮಾಡಲು ದಿನದ ೨೪ ಗಂಟೆ ಕಾರ್ಯ ನಿರ್ವಹಿಸುವ ನಿಯಂತ್ರಣ ಕೊಠಡಿಯನ್ನು ಸ್ಥಾಪಿಸಿದೆ. ಬೆಂಬಲ ಬಯಸುವವರಿಗೆ ವಿದೇಶಾಂಗ ಸಚಿವಾಲಯ ಸಹಾಯವಾಣಿ ಸಂಖ್ಯೆಗಳನ್ನು ಹಂಚಿಕೊಂಡಿದೆ. ಟೋಲ್-ಫ್ರೀ ಸಂಖ್ಯೆ ೧೮೦೦ ೧೧೮ ೭೯೭, ದೂರವಾಣಿ ಸಂಖ್ಯೆ, ೯೧-೧೧-೨೩೦೧ ೨೧೧೩, ೯೧-೧೧-೨೩೦೧ ೪೧೦೪, ಮತ್ತು ೯೧-೧೧-೨೩೦೧ ೭೯೦೫ ಹಾಗೂ ಇಮೇಲ್ situationroom@mea.gov.in ಮತ್ತು ವಾಟ್ಸಾಪ್ ಸಂಖ್ಯೆ ೯೧-೯೯೬೮೨ ೯೧೯೮೮ ಸಂಪರ್ಕಿಸಬಹುದಾಗಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

<><><><>

ಹರಿಯಾಣದ ಮಾನೆಸರ್‌ನಲ್ಲಿಂದು ಭಾರತದ ಅತಿದೊಡ್ಡ ಗತಿಶಕ್ತಿ ಸರಕು ಟರ್ಮಿನಲ್ ಅನ್ನು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಲೋಕಾರ್ಪಣೆಗೊಳಿಸಿದರು. ಈ ವೇಳೆ ಮಾತನಾಡಿದ ಸಚಿವರು, ೪೫ ಎಕರೆಗಳಷ್ಟು ವಿಸ್ತೀರ್ಣದಲ್ಲಿರುವ ಈ ಸರಕು ಟರ್ಮಿನಲ್ ೪ ಲಕ್ಷ ೫೦ ಸಾವಿರ ವಾಹನಗಳನ್ನು ಸಾಗಿಸಬಹುದು. ದೇಶದಲ್ಲಿ ೧೦೮ ಬಹು ಮಾದರಿ ಸರಕು ಟರ್ಮಿನಲ್‌ಗಳು ಸಿದ್ಧವಾಗಿದ್ದು, ಶೀಘ್ರದಲ್ಲೇ ಕಾರ್ಯನಿರ್ವಹಿಸಲಿವೆ ಎಂದು ಹೇಳಿದರು.

<><><><>

ಅಹಮದಾಬಾದ್ ವಿಮಾನ ಅಪಘಾತದಲ್ಲಿ ಮೃತಪಟ್ಟವರ ಪೈಕಿ ೧೨೫ ಜನರನ್ನು ಡಿಎನ್‌ಎ ಪರೀಕ್ಷೆಯ ಮೂಲಕ ನಿನ್ನೆ ರಾತ್ರಿಯವರೆಗೆ ಗುರುತಿಸಲಾಗಿದೆ ಎಂದು ಗುಜರಾತ್ ಆರೋಗ್ಯ ಸಚಿವ ಋಷಿಕೇಶ್ ಪಟೇಲ್ ತಿಳಿಸಿದ್ದಾರೆ. ಈ ಪೈಕಿ ೮೩ ಮೃತದೇಹಗಳನ್ನು ಈಗಾಗಲೇ ಅವರ ಕುಟುಂಬಗಳಿಗೆ ಹಸ್ತಾಂತರಿಸಲಾಗಿದೆ. ಗುರುತಿಸುವಿಕೆಯ

ಸೂಕ್ತ ಮತ್ತು ಅಗತ್ಯ ಪ್ರಕ್ರಿಯೆ ಪೂರ್ಣಗೊಂಡ ನಂತರ ಉಳಿದ ಮೃತದೇಹಗಳನ್ನು ಶೀಘ್ರದಲ್ಲೇ ಸಂಬಂಧಪಟ್ಟ ಕುಟುಂಬದವರಿಗೆ ಹಸ್ತಾಂತರಿಸಲಾಗುವುದು ಎಂದು ಸಚಿವರು ಹೇಳಿದ್ದಾರೆ.

<><><><>

ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಅವರು ಅಸ್ಸಾಂನ ಶಿವಸಾಗರ್ ಜಿಲ್ಲೆಯ ತೈಲ ಮತ್ತು ನೈಸರ್ಗಿಕ ಅನಿಲ ನಿಗಮ ನಡೆಸುತ್ತಿರುವ ತೈಲ ಬಾವಿ ನಿಯಂತ್ರಣ ಚಟುವಟಿಕೆಗಳನ್ನು ಪರಿಶೀಲಿಸಿದ್ದಾರೆ.

<><><><>

ಬರಗಾಲವನ್ನು ಎದುರಿಸಲು ಮತ್ತು ಮರುಪೂರಣ ಕುರಿತು ವಿಶ್ವ ದಿನವನ್ನು ಇಂದು ಜಾಗತಿಕವಾಗಿ ಆಚರಿಸಲಾಗುತ್ತಿದೆ. 'ಭೂಮಿಯನ್ನು ಪುನಃಸ್ಥಾಪಿಸಿ. ಅವಕಾಶಗಳನ್ನು ತೆರೆಯುವುದು'– ಈ ವರ್ಷದ ಧ್ಯೇಯವಾಕ್ಯವಾಗಿದೆ. ಇದು ಪ್ರಕೃತಿಯ ಅಡಿಪಾಯವಾದ ಭೂಮಿಯನ್ನು ಮರುಪೂರಣಗೊಳಿಸುವುದರಿಂದ ಉದ್ಯೋಗಗಳನ್ನು ಹೇಗೆ ಸೃಷ್ಟಿಸಬಹುದು, ಆಹಾರ ಮತ್ತು ನೀರಿನ ಸುರಕ್ಷತೆಯನ್ನು ಹೆಚ್ಚಿಸಬಹುದು, ಹವಾಮಾನ ಕ್ರಿಯೆಯನ್ನು ಬೆಂಬಲಿಸಬಹುದು ಮತ್ತು ಆರ್ಥಿಕ ಸ್ಥಿತಿಸ್ಥಾಪಕತ್ವವನ್ನು ಹೇಗೆ ನಿರ್ಮಿಸಬಹುದು ಎಂಬುದರ ಮೇಲೆ ಗಮನ ಹರಿಸುತ್ತದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>